# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 09.12.2024ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2024ನೇ ಸಾಲಿನ ಏಳನೇ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು:**

| | | | |
|---|---|---|---|
| 1. | ಪ್ರೊ ಪಿ ಎಲ್.ಧರ್ಮ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ ರಾಮೇಗೌಡ ಎಂ<br>ಜಂಟಿ ನಿರ್ದೇಶಕರು,(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಪರಿಣಿತ<br>ಡೀನರು, ಕಲಾ ನಿಕಾಯ | ಸದಸ್ಯರು | |
| 4. | ಡಾ ಎಸ್.ಬಿ ಎಂ ಪ್ರಸನ್ನ | ಸದಸ್ಯರು | |
| 5. | ಡಾ ಕೆ.ಸಿ. ಮಹದೇಶ | ಸದಸ್ಯರು | |
| 6. | ಡಾ ವರದರಾಜ ಸಿ ಎಚ್. | ಸದಸ್ಯರು | |
| 7. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು | |
| 8. | ಶ್ರೀ. ಸಿ.ಎ. ನಿತಿನ್ ಜೆ ಶೆಟ್ಟಿ | ಸದಸ್ಯರು | |
| 9. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು | |
| 10. | ಶ್ರೀ ರಘುರಾಜ್ | ಸದಸ್ಯರು | |
| 11. | ಶ್ರೀ ಅಚ್ಯುತ ಗಟ್ಟಿ | ಸದಸ್ಯರು | |
| 12. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು | ಆನ್‌ಲೈನ್ ಮೂಲಕ |
| 13. | ಡಾ. ಸಂದೇಶ್ ಕೆ.ಎಸ್.,<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು | ಆನ್‌ಲೈನ್ ಮೂಲಕ |
| 14. | ಪ್ರೊ ಹೆಚ್. ದೇವೇಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 15. | ಪ್ರೊ ಸಂಗಪ್ಪ ವೈ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು | |
| 16. | ಶ್ರೀ ಕೆ ರಾಜು ಮೊಗವೀರ, ಕೆ.ಎ.ಎಸ್.<br>ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ | |

**ಅನುಪಸ್ಥಿತರು:**

| | | |
|---|---|---|
| 1. | ಡಾ. ಶಂಕರಮೂರ್ತಿ ಎಚ್.ಕೆ | ಸದಸ್ಯರು |

# ಪ್ರಾರಂಭಿಕ

**ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.**

➢ **ಸ್ವಾಗತ:**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000 ದ ಪ್ರಕರಣ 28 (1)(ಡಿ) ಯ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಡೀನರ ನೆಲೆಯಲ್ಲಿ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮ ನಿರ್ದೇಶನಗೊಂಡಿರುವ **ಪ್ರೊ. ಪರಿಣಿತ,** ಡೀನರು, ಕಲಾ ನಿಕಾಯ ಹಾಗೂ ಪ್ರಾಧ್ಯಾಪಕರು, ಆಂಗ್ಲ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಕುಲಪತಿಯವರು ಸ್ವಾಗತಿಸಿದರು.

➢ **ಕೃತಜ್ಞತೆ :**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 28(1)(ಡಿ)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಡೀನರ ನೆಲೆಯಲ್ಲಿ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಪ್ರೊ. ಎಂ. ಜಯಶಂಕರ್,** ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಹಾಗೂ ಹಿರಿಯ ಪ್ರಾಧ್ಯಾಪಕರು (ಸೂಕ್ಷ್ಮಾಣು ಜೀವವಿಜ್ಞಾನ) ಇವರ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಸಿಂಡಿಕೇಟ್ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರು ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುತ್ತಾರೆ. ಇವರಿಗೆ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## ಪ್ರಾಸ್ತಾವಿಕ

**ಈ ಕೆಳಗಿನ ವಿಚಾರಗಳನ್ನು ಸಭೆಯ ಗಮನಕ್ಕೆ ತರಲಾಯಿತು.**

1) ಡಾ.ಕೆ.ಸಿ.ಮಹದೇಶ ಮತ್ತು ಡಾ.ಎಸ್.ಬಿ.ಎಂ.ಪ್ರಸನ್ನ ಇವರು ಆಡಳಿತ ಸೌಧದಲ್ಲಿ ನಿರ್ಮಿಸಿರುವ ಲಿಫ್ಟ್‌ನ್ನು ಕೂಡಲೇ ಉಪಯೋಗಕ್ಕೆ ಒದಗಿಸುವ ಮೂಲಕ ವಿಶೇಷ ಚೇತನ ವ್ಯಕ್ತಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ನೀಡಿದ ಸಲಹೆಯನ್ನು ಪರಿಗಣಿಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ಣಯಿಸಲಾಯಿತು.

2) ವಿವಿಧ ಸಂಸ್ಥೆಗಳ ಸಿ.ಎಸ್.ಆರ್. ನಿಧಿಯಿಂದ ಹಣಕಾಸು ನೆರವು ಪಡೆಯುವ ನಿಟ್ಟಿನಲ್ಲಿ ವಿಶ್ವವಿದ್ಯಾನಿಲಯದ ವತಿಯಿಂದ ಪ್ರಸ್ತಾವನೆಗಳನ್ನು ತಯಾರಿಸಿ ವಿವಿಧ ಸಂಸ್ಥೆಗಳಿಗೆ ಸಲ್ಲಿಸಿರುವ ಬಗ್ಗೆ ಸಭೆಗೆ ಮಾಹಿತಿ ನೀಡಲಾಯಿತು.

3) ನವ ಮಂಗಳೂರು ಬಂದರು ಪ್ರಾಧಿಕಾರದ C.S.R. ನಿಧಿಯಿಂದ ವಿಶ್ವವಿದ್ಯಾನಿಲಯದ ಉಪಹಾರ ಗೃಹವನ್ನು ಸುಮಾರು ರೂ. ೮೦.೦೦ ಲಕ್ಷ ವೆಚ್ಚದಲ್ಲಿ ನವೀಕರಣಗೊಳಿಸುವ ಬಗ್ಗೆ ಸಲ್ಲಿಸಲಾದ ಪ್ರಸ್ತಾವನೆಗೆ ರೂ.30.00 ಲಕ್ಷ ಮಂಜೂರಾಗಿರುವುದಾಗಿ ತಿಳಿಸಿದರು. ಸದರಿ ಅನುದಾನದಿಂದ ಯಾಂತ್ರೀಕೃತ ಅಡುಗೆ ಸಲಕರಣೆಗಳೊಂದಿಗೆ ಸ್ವಚ್ಛತೆಯನ್ನು ಕಾಪಾಡುವ ನಿಟ್ಟಿನಲ್ಲಿ ಅಗತ್ಯವಿರುವ ಮೂಲ ಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗುವುದೆಂದು ತಿಳಿಸಲಾಯಿತು.

**I. ನಡವಳಿಗಳ ದೃಢೀಕರಣ**

**1) ದಿನಾಂಕ 29.10.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ಆರನೇ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ**

- ದೃಢೀಕರಿಸಲಾಯಿತು -

**2) ದಿನಾಂಕ 15.11.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ಚತುರ್ಥ ವಿಶೇಷ ಸಭೆಯ ನಡವಳಿಯ ದೃಢೀಕರಣ**

ಕಾರ್ಯಸೂಚಿ ಸಂಖ್ಯೆ ಹಣಕಾಸು:ವಿ.ಸ.4:1(2024)ರ ನಿರ್ಣಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯದ ಹಣಕಾಸು ವಹಿವಾಟುಗಳನ್ನು Double Entry System ಮೂಲಕ ದಾಖಲಿಸುವ ಬಗ್ಗೆ ಕೈಗೊಂಡ ನಿರ್ಣಯದ ಅನುಷ್ಠಾನದ ಕುರಿತು ಶ್ರೀ ನಿತಿನ್ ಜೆ. ಶೆಟ್ಟಿ ಇವರು ಪ್ರಸ್ತಾಪಿಸಿ ಈ ಪ್ರಕ್ರಿಯೆಯನ್ನು ಜನವರಿ 1, 2025 ರಿಂದಲೇ ಪ್ರಾರಂಭಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. ಈ ಬಗ್ಗೆ ಅಗತ್ಯವಿರುವ Tally Prime Software ಖರೀದಿಸುವ ನಿಟ್ಟಿನಲ್ಲಿ ಕೂಡಲೇ ಖರೀದಿ ಸಮಿತಿಗೆ ಮಂಡಿಸಿ ಅನುಮೋದನೆ ಪಡೆದು ಸಿಂಡಿಕೇಟಿನ ಘಟನೋತ್ತರ ಅನುಮೋದನೆಗೆ ಮಂಡಿಸಲು ನಿರ್ಣಯಿಸಲಾಯಿತು.

**ಉಳಿದಂತೆ ನಡವಳಿಯನ್ನು ಅನುಮೋದಿಸಲಾಯಿತು.**

## II. ಅನುಸರಣಾ ವರದಿಯ ಅನುಮೋದನೆ

**ದಿನಾಂಕ 04.09.2024ರಂದು ನಡೆದ ಸಿಂಡಿಕೇಟಿನ 2024ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

ಕಾರ್ಯಸೂಚಿ ಸಂಖ್ಯೆ : ಸಿಂಡಿಕೇಟು:ಸಾ.ಸ.5:22:2024 ರಲ್ಲಿ ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ಸುರೇಶ್ ಕುಮಾರ್ ಬಿ. ನಾವೂರು ಇವರು ಸಲ್ಲಿಸಿರುವ ಪ್ರಸ್ತಾವನೆಯ ಕುರಿತು ನೀಡಿರುವ ನಿರ್ಣಯಗಳ ಅನುಸರಣಾ ವರದಿಯ ಬಗ್ಗೆ ಪ್ರಸ್ತಾಪಿಸಿ, PM USHA ಅನುದಾನದ ಮಾಹಿತಿಯ ಬಗ್ಗೆ ಮಂಡಿಸಲಾದ ಪ್ರಸ್ತಾವನೆಗೆ ವಿಶ್ವವಿದ್ಯಾನಿಲಯದಿಂದ ನೀಡಲಾಗಿರುವ ಮಾಹಿತಿಗೂ ಹಾಗೂ ನಿರ್ಣಯದ ಅನುಸರಣಾ ವರದಿಯಲ್ಲಿ ನೀಡಿರುವ ಮಾಹಿತಿಗೂ ತಾಳೆಯಾಗದಿರುವ ಬಗ್ಗೆ ಸ್ಪಷ್ಟೀಕರಣವನ್ನು ಕೋರಿದ್ದು ಈ ಬಗ್ಗೆ ಸೂಕ್ತ ಸ್ಪಷ್ಟೀಕರಣವನ್ನು ಪಿ.ಎಂ.ಇ.ಬಿ. ನಿರ್ದೇಶಕರಿಂದ ಪಡೆದು ಮಾನ್ಯ ಸದಸ್ಯರಿಗೆ ನೀಡಲು ನಿರ್ಣಯಿಸಲಾಯಿತು.

**ಉಳಿದಂತೆ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.**

## III. ಈ ಸಿಂಡಿಕೇಟು ಸಭೆಗೆ ಮಂಡಿಸಲಿರುವ ಕಾರ್ಯಸೂಚಿಗಳು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ:ಸಾ.ಸ.7:1 (2024) |
| ವಿಷಯ: | ಶೈಕ್ಷಣಿಕ ವರ್ಷ 2025-26ನೇ ಸಾಲಿನ ಕಾಲೇಜುಗಳ ಸಂಯೋಜನಾ ಶುಲ್ಕದ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. ಮಾನ್ಯ ಸಿಂಡಿಕೇಟು ಸದಸ್ಯರುಗಳಾದ ಡಾ.ಎಸ್.ಬಿ.ಎಂ. ಪ್ರಸನ್ನ ಮತ್ತು ಡಾ.ಕೆ.ಸಿ. ಮಹದೇಶ ಇವರು ಮುಂದಿನ ಶೈಕ್ಷಣಿಕ ವರ್ಷದಿಂದ ಸಂಯೋಜನಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಆರ್ಥಿಕ ದೃಷ್ಟಿಯಿಂದ 10% ಕ್ಕಿಂತಲೂ ಹೆಚ್ಚು ಏರಿಕೆ ಮಾಡುವ ಬಗ್ಗೆ ಸಲಹೆ ನೀಡಿದರು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಡಿಇವಿ:ಸಾ.ಸ.7:2 (2024) |
| ವಿಷಯ: | CARER/CARRT ಕೇಂದ್ರದಲ್ಲಿರುವ ವಿವಿಧ ಸೌಲಭ್ಯಗಳ ಬಳಕೆಗೆ ಸಂಬಂಧಿಸಿ ಮಾರ್ಗಸೂಚಿ ತಯಾರಿಸಲು ರಚಿಸಿದ ಸಮಿತಿ ಸಭೆಯ ನಡವಳಿಯ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಪ.ಜಾ.ಪ.ಪಂ.ಘಟಕ:ಸಾ.ಸ.7:3 (2024)

ವಿಷಯ: ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಘಟಕಗಳ ಸ್ಥಾಯಿ ಸಮಿತಿ ಸಭೆಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ಕೆ. ರಘುರಾಜ್ ಇವರು ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯವನ್ನು ಯಥಾಸ್ಥಿತಿಯಲ್ಲಿ ಮುಂದುವರಿಸುವಂತೆ ವಿನಂತಿಸಿದರು. ಸ್ಥಾಯಿ ಸಮಿತಿಯ ಶಿಫಾರಸ್ಸುಗಳನ್ನು ಜಾರಿಗೊಳಿಸಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.7:4 (2024)

ವಿಷಯ: ಅಧ್ಯಯನ ಮಂಡಳಿಗಳ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಗಳ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.7:5 (2024)

ವಿಷಯ: ಶ್ರೀ ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ**.**

**ವಿಷಯ 1 :** ವಿಶ್ವವಿದ್ಯಾನಿಲಯ ಸ್ವಾಧೀನವಿರುವ ಜಾಗದ ಸರ್ವೇ ಕಾರ್ಯಕ್ಕೆ ಈಗಾಗಲೇ ಹಣ ಪಾವತಿಯಾಗಿದ್ದು, ದಿನಾಂಕ 24.05.2024 ರಿಂದ ಸರ್ವೇ ಕಾರ್ಯ ಪ್ರಾರಂಭವಾಗಿರುತ್ತದೆಂದು ಈ ಹಿಂದಿನ ಸಿಂಡಿಕೇಟು ಸಭೆಯಲ್ಲಿ ವರದಿ ನೀಡಲಾಗಿತ್ತು. ಆದರೆ ಆರು ತಿಂಗಳಾದರೂ ಸರ್ವೇ ನಕಾಶೆ ಬಂದಿಲ್ಲ ಈ ಬಗ್ಗೆ ಮಾಹಿತಿ ನೀಡುವ ಬಗ್ಗೆ ಪ್ರಸ್ತಾವನೆ.

**ನಿರ್ಣಯ:** ವಿಶ್ವವಿದ್ಯಾನಿಲಯದ ಸ್ವಾಧೀನದಲ್ಲಿರುವ ಜಾಗದ ಸರ್ವೇ ಕಾರ್ಯದ ಬಗ್ಗೆ ಕುಲಸಚಿವರು ಸಭೆಗೆ ಸಮಗ್ರ ಮಾಹಿತಿಯನ್ನು ನೀಡಿದರು. ವಿಶ್ವವಿದ್ಯಾನಿಲಯದ ಅಧೀನದಲ್ಲಿರುವ ಜಮೀನಿನ ಅತಿಕ್ರಮಣ ತಡೆಯುವ ನಿಟ್ಟಿನಲ್ಲಿ ಆದಷ್ಟು ಶೀಘ್ರವಾಗಿ ಸಾಧ್ಯವಿರುವಲ್ಲಿ ಆವರಣ ಗೋಡೆಯನ್ನು ನಿರ್ಮಿಸುವಂತೆ ಸಿಂಡಿಕೇಟು ಸದಸ್ಯರುಗಳು ಸಲಹೆ ನೀಡಿದರು. ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**ವಿಷಯ 2 :** ವಿಶ್ವವಿದ್ಯಾನಿಲಯಗಳ ಅಧೀನದಲ್ಲಿರುವ ವಿವಿಧ ಪೀಠಗಳ ನಿರ್ದೇಶಕರ ಅವಧಿ ಎಷ್ಟು ವರ್ಷಗಳು ಹಾಗೂ ಸದಸ್ಯರುಗಳ ಅವಧಿ ಎಷ್ಟು ವರ್ಷ ಎಂಬುದರ ಬಗ್ಗೆ ಮಾಹಿತಿಗಾಗಿ ಪ್ರಸ್ತಾವನೆ.

**ನಿರ್ಣಯ:** ಇನ್ನು ಮುಂದಕ್ಕೆ ವಿಶ್ವವಿದ್ಯಾನಿಲಯಗಳ ವಿವಿಧ ಅಧ್ಯಯನ ಪೀಠಗಳ ನಿರ್ದೇಶಕರ / ಸಂಯೋಜಕರ ಅವಧಿಯನ್ನು ಎರಡು ವರ್ಷಗಳಿಗೆ ಸೀಮಿತಗೊಳಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.7:6 (2024)

ವಿಷಯ: **ಶ್ರೀ ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.**

**ವಿಷಯ 1 :** ಮಂಗಳೂರು ವಿಶ್ವವಿದ್ಯಾನಿಲಯವು 2 ವರ್ಷಗಳ ಹಿಂದೆ ಸುತ್ತುಮುತ್ತಲಿನ 5 ಗ್ರಾಮಗಳಲ್ಲಿ 11 ಸರಕಾರಿ ಶಾಲೆಗಳನ್ನು ದತ್ತು ಸ್ವೀಕಾರ ಮಾಡಿ ಶಾಲೆಗಳಲ್ಲಿ ನಾಮಫಲಕ ಅಳವಡಿಸಿರುತ್ತದೆ. ಆದರೆ ಯಾವುದೇ ಕಾರ್ಯಕ್ರಮಗಳು ಆಗಿಲ್ಲ, ಆರ್ಥಿಕ ಕೊರತೆಯಿದ್ದರೂ ಮಾನವ ಸಂಪನ್ಮೂಲದ ಕೊರತೆಯಾಗಿಲ್ಲ. ಸರಕಾರಿ ಶಾಲಾ ಮಕ್ಕಳಿಗೆ ವಿಶ್ವವಿದ್ಯಾನಿಲಯದ ವತಿಯಿಂದ ವಿಜ್ಞಾನ ವಿಭಾಗ, ಇಂಗ್ಲೀಷ್ ವಿಭಾಗ, ಕನ್ನಡ ವಿಭಾಗ, ಗಣಿತ ವಿಭಾಗ, ಕ್ರೀಡಾ ವಿಭಾಗಗಳಿಂದ ಸರಕಾರಿ ಶಾಲೆಗಳಲ್ಲಿ ಕ್ರೀಡೆಗೆ ಕ್ರೀಡಾ ಶಿಕ್ಷಕರು ಹಾಗೂ ಇತರ ಶಿಕ್ಷಕರ ಕೊರತೆಯಿರುವುದರಿಂದ ಆಯಾ ವಿಭಾಗಗಳಿಂದ ಮಾನವೀಯ ಮೌಲ್ಯಗಳ ಬಗ್ಗೆ ಹಾಗೂ ಕ್ರೀಡಾ ತರಬೇತಿಗೆ 2ನೇ ಶನಿವಾರ ಅಥವಾ ವಾರದ 2 ದಿನಗಳಲ್ಲಿ 1 ಗಂಟೆ ಕಾಲ ತರಬೇತಿ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳುವ ಬಗ್ಗೆ ಪ್ರಸ್ತಾವನೆ.

**ನಿರ್ಣಯ:** **ಸರ್ಕಾರಿ ಶಾಲೆಗಳ ದತ್ತು ಸ್ವೀಕಾರ ಮತ್ತು ಅಲ್ಲಿ ಕೈಗೊಂಡ ಚಟುವಟಿಕೆಗಳು ಹಾಗೂ ಅಗತ್ಯವಿರುವ ಕ್ರಮಗಳ ಬಗ್ಗೆ ಸೂಕ್ತ ಅಂಕಿ ಅಂಶಗಳೊಂದಿಗೆ ವರದಿಯನ್ನು ಪಡೆಯುವ ಜವಾಬ್ದಾರಿಯನ್ನು ನೆಹರೂ ಅಧ್ಯಯನ ಕೇಂದ್ರಕ್ಕೆ ವಹಿಸಲು** ನಿರ್ಣಯಿಸಲಾಯಿತು.

**ವಿಷಯ 2 :** ಮಂಗಳೂರು ವಿಶ್ವವಿದ್ಯಾನಿಲಯ ಮಟ್ಟದ ಯಾವುದೇ ಸ್ಪರ್ಧೆಗಳನ್ನು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಮಂಗಳ ಸಭಾಂಗಣದಲ್ಲಿ ಮಾಡಿ ವಿಶ್ವವಿದ್ಯಾನಿಲಯ ಸಂಯೋಜಿತ ಕಾಲೇಜುಗಳ ವಿದ್ಯಾರ್ಥಿಗಳು ಕ್ಯಾಂಪಸ್‌ಗೆ ಬರುವಂತೆ ಅವಕಾಶ ಕಲ್ಪಿಸಿ ಮುಂದಿನ ಸ್ನಾತಕೋತ್ತರ ವಿದ್ಯಾಭ್ಯಾಸಕ್ಕೆ ಹೆಚ್ಚಿನ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯ ಕ್ಯಾಂಪಸ್‌ನಲ್ಲಿಯೇ ಶಿಕ್ಷಣಕ್ಕೆ ಬರುವಂತೆ ಪ್ರೋತ್ಸಾಹ ನೀಡುವ ಬಗ್ಗೆ ಅವಕಾಶ ಕಲ್ಪಿಸುವುದು.

**ನಿರ್ಣಯ:** ವಿಶ್ವವಿದ್ಯಾನಿಲಯ ಅಂತರ ಕಾಲೇಜು ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮಗಳನ್ನು ವಿಶ್ವವಿದ್ಯಾನಿಲಯದ ಆವರಣದಲ್ಲಿ ನಡೆಸಲು ನಿರ್ಣಯಿಸಲಾಗಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು.

**ವಿಷಯ 3 :** ವಿಶ್ವವಿದ್ಯಾನಿಲಯದಲ್ಲಿ ಕಳೆದ 4 ವರ್ಷಗಳಿಂದ ಅಂತರ ಕಾಲೇಜು ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರಗಳು ನಡೆಯದಿರುವುದರಿಂದ ಪ್ರತಿ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ಘಟಕಗಳು ಆಯಾ ಕಾಲೇಜುಗಳ ಪ್ರದೇಶದಲ್ಲಿರುವ ಶಾಲೆಗಳನ್ನು ದತ್ತು ಸ್ವೀಕಾರ ಮಾಡಿ ಅದೇ ಗ್ರಾಮದಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅದೇ ಪ್ರದೇಶದಲ್ಲಿ ವಾರ್ಷಿಕ ಶಿಬಿರಗಳನ್ನು ಮಾಡಿ ಸಮಾಜದಲ್ಲಿ ಸೌಹಾರ್ದತೆ ಮಾನವೀಯ ಸಂಬಂಧ ಹಾಗೂ ಭಾವೈಕ್ಯತೆಗೆ ಪ್ರೋತ್ಸಾಹ ನೀಡುವ ಬಗ್ಗೆ ಅವಕಾಶ ಕಲ್ಪಿಸುವುದು.

**ನಿರ್ಣಯ:** **ರಾಷ್ಟ್ರೀಯ ಸೇವಾ ಯೋಜನೆಯನ್ನು ಪುನಃ ಸಕ್ರಿಯಗೊಳಿಸಲು ಸೂಕ್ತ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.**

**ವಿಷಯ 4 :** ವಿಶ್ವವಿದ್ಯಾನಿಲಯದ ಆವರಣದಲ್ಲಿ ಪ್ರತಿ ತಿಂಗಳ 2ನೇ ಶನಿವಾರ ಅಥವಾ 4ನೇ ಶನಿವಾರ ವಿಶ್ವವಿದ್ಯಾನಿಲಯ ಆಡಳಿತ ವಿಭಾಗ, ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಗಳು ವಿಶ್ವವಿದ್ಯಾನಿಲಯ ಕ್ಯಾಂಪಸ್‌ನ ರಾಷ್ಟ್ರೀಯ ಸೇವಾ ಯೋಜನಾ ಘಟಕದೊಂದಿಗೆ ಸ್ವಚ್ಛತಾ ಅಭಿಯಾನದ ಅಂಗವಾಗಿ ಬೆಳಿಗ್ಗೆ ಗಂಟೆ 9.00 ರಿಂದ 10.30ರ ತನಕ ಶ್ರಮದಾನದ ಮೂಲಕ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳುವ ಬಗ್ಗೆ ಘಟಕದ ಯೋಜನಾಧಿಕಾರಿಗಳು ಕಾರ್ಯಕ್ರಮ ನಡೆಸುವ ಬಗ್ಗೆ ಅವಕಾಶ ಕಲ್ಪಿಸುವುದು.

**ನಿರ್ಣಯ:** **ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಸಿಬ್ಬಂದಿಗಳು ಹಾಗೂ ಎಲ್ಲಾ ವಿದ್ಯಾರ್ಥಿಗಳನ್ನು ಬಳಸಿಕೊಂಡು ಸ್ವಚ್ಛತಾ ಕಾರ್ಯಕ್ರಮವನ್ನು ತಿಂಗಳಲ್ಲಿ ಒಂದು ದಿನ ಕೈಗೊಳ್ಳಲು ನಿರ್ಣಯಿಸಲಾಯಿತು, ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಸಿಂಡಿಕೇಟು ಸದಸ್ಯರುಗಳು ಕೂಡಾ ಸದರಿ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ ಮಾನ್ಯ ಸದಸ್ಯರಾದ ಡಾ.ಕೆ.ಸಿ.ಮಹದೇಶ ಇವರು ಸಲಹೆ ನೀಡಿದರು.**

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.7:7 (2024)

ವಿಷಯ: **ಡಾ.ಕೆ.ಸಿ. ಮಹದೇಶ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.**

**ವಿಷಯ 1 :** 2024-25 ಸಾಲಿನ ಘಟಿಕೋತ್ಸವ ಸಮಾರಂಭ ನಡೆಸುವ ಬಗ್ಗೆ ವಿದ್ಯಾರ್ಥಿಗಳ ಮುಂದಿನ ಭವಿಷ್ಯದ ದೃಷ್ಟಿಯಿಂದ ಚರ್ಚಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳಲು ಕೋರಿದೆ.

**ನಿರ್ಣಯ:** ಘಟಿಕೋತ್ಸವವನ್ನು ಮಾರ್ಚ್ 2025ರಲ್ಲಿ ನಡೆಸುವ ಬಗ್ಗೆ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**ವಿಷಯ 2 :** ಮಂಗಳೂರು ವಿಶ್ವವಿದ್ಯಾನಿಲಯದ ಮತ್ತು ಘಟಕ ಕಾಲೇಜುಗಳ ಆವರಣದಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ಕೇಂದ್ರ ತೆರೆಯುವ ತರಬೇತಿ ನೀಡುವ ಮತ್ತು ಉದ್ಯೋಗ ಅವಕಾಶ ನಿಯೋಜನೆ ವಿಷಯದಲ್ಲಿ ತೆಗೆದುಕೊಂಡಿರುವ ನಿರ್ಣಯಗಳ ಮೇಲಿನ ವಿಷಯಗಳ ಬಗ್ಗೆ ಚರ್ಚಿಸಿ ನಿರ್ಣಯ ಮಾಡಲು ಕೋರಿದೆ.

**ನಿರ್ಣಯ:** ಉದ್ಯೋಗ ಮಾಹಿತಿ ಕೇಂದ್ರದಿಂದ ಈ ಬಗ್ಗೆ ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ. ಮಹದೇಶ ಇವರಿಗೆ ಕಳುಹಿಸಿಕೊಡಲು ನಿರ್ಣಯಿಸಲಾಯಿತು.

**ವಿಷಯ 3 :** ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರು, ಹೊರಗುತ್ತಿಗೆ ನೌಕರರ ಮತ್ತು ತಾತ್ಕಾಲಿಕ ನೌಕರರ ಕ್ಷೇಮಾಭಿವೃದ್ಧಿ ವಿಷಯದಲ್ಲಿ ಅವರ ಸಂಬಳ ಮತ್ತು ಭದ್ರತೆಗಳ ಬಗ್ಗೆ ಮತ್ತು ಅತಿಥಿ ಉಪನ್ಯಾಸಕರ ಕಾರ್ಯಭಾರ, ಮಾರ್ಗಸೂಚಿ ರಚನೆ ಬಗ್ಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲು ಕೋರಿದೆ.

**ನಿರ್ಣಯ:** ಜನವರಿ 2025 ರಿಂದ ಹೊರಗುತ್ತಿಗೆ ಪೂರೈಕೆ ಸಂಸ್ಥೆ ಬದಲಾಗುತ್ತಿದ್ದು, ಹೊರಗುತ್ತಿಗೆ ನೌಕರರ ಕ್ಷೇಮಾಭಿವೃದ್ಧಿ ನಿಧಿ ಪಾವತಿಯ ವಿಷಯದಲ್ಲಿ ಸೂಕ್ತ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**ವಿಷಯ 4 :** ಪ್ರತಿಷ್ಠಿತ ಮಂಗಳೂರು ವಿಶ್ವವಿದ್ಯಾಲಯದ ಆಧಾರ ಸ್ತಂಭವಾಗಿರುವ ವಿದ್ಯಾರ್ಥಿಗಳು, ಇಲ್ಲಿ ವಿದ್ಯಾಭ್ಯಾಸ ಅರಸಿ ಬರುವ ವಿದ್ಯಾರ್ಥಿಗಳ ಪ್ರವೇಶಾತಿ, ಪ್ರವೇಶಾತಿ ಶುಲ್ಕ, ಅವರ ಭದ್ರತೆ ಮತ್ತು ಅವರಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ವಿಶ್ವವಿದ್ಯಾನಿಲಯದ ಆದ್ಯ ಕರ್ತವ್ಯವಾಗಿದೆ, ಹಾಗಾಗಿ 2024-2025ನೇ ಸಾಲಿನ ವಿದ್ಯಾರ್ಥಿಗಳ ಪ್ರವೇಶಾತಿ ಶುಲ್ಕ ನಿಗದಿಪಡಿಸಿದ ವಿಚಾರವಾಗಿ ಮತ್ತು ವಿದ್ಯಾರ್ಥಿಗಳ ಎಲ್ಲಾ ಸಮಸ್ಯೆಗಳ ನಿವಾರಣೆಗೆ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲು ಕೋರಲಾಗಿದೆ.

**ನಿರ್ಣಯ:** ಶುಲ್ಕ ಹೆಚ್ಚಳವು ಸರ್ಕಾರ ನಿಗದಿಪಡಿಸಿರುವ ಮಿತಿಗಿಂತಲೂ ಕಡಿಮೆ ಇರುವುದಾಗಿ ಸಭೆಗೆ ಮಾಹಿತಿ ನೀಡಲಾಯಿತು. ಅದಾಗ್ಯೂ ಮುಂದಿನ ವರ್ಷದಲ್ಲಿ ಶುಲ್ಕ ಪರಿಷ್ಕರಣೆ ಮಾಡುವ ಸಂದರ್ಭದಲ್ಲಿ ಈ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲು ನಿರ್ಣಯಿಸಲಾಯಿತು.

**ವಿಷಯ 5 :** ಶ್ರೀ ಬಸವೇಶ್ವರ ಅಧ್ಯಯನ ಕೇಂದ್ರದ ಸ್ಥಾಪನೆ ಅನುಮತಿ ಮತ್ತು ಮುಂದುವರಿದ ಸರ್ಕಾರದ ಅನುದಾನ ತರುವ ಬಗ್ಗೆ ಮತ್ತು ಇತರೆ ಅನುದಾನ ತರುವ ವಿಚಾರಗಳ ಕುರಿತು ಚರ್ಚಿಸಿ ತೀರ್ಮಾನ ಕೈಗೊಳ್ಳಲು ಕೋರಿದೆ,

**ನಿರ್ಣಯ:** ಶ್ರೀ ಬಸವೇಶ್ವರ ಅಧ್ಯಯನ ಕೇಂದ್ರದ ಸ್ಥಾಪನೆ ಹಾಗೂ ಅನುದಾನ ತರುವ ನಿಟ್ಟಿನಲ್ಲಿ ಶ್ರಮಿಸುತ್ತಿರುವ ಸಿಂಡಿಕೇಟ್ ಸದಸ್ಯರಾದ ಡಾ. ಕೆ.ಸಿ. ಮಹದೇಶ್ ಇವರ ಕಾರ್ಯವನ್ನು ಶ್ಲಾಘಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಸಾ.ಸ.7:8 (2024)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಘಟಕ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಗ್ರೂಪ್ ಡಿ ವ್ಯವಸ್ಥೆಗೆ ಸಿಬ್ಬಂದಿಗಳನ್ನು ಪಡೆದುಕೊಳ್ಳುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು. ಹೊರಗುತ್ತಿಗೆ ಸಿಬ್ಬಂದಿಗಳಿಗೆ ಸಂಬಂಧಿಸಿದ, ಪಿ.ಎಫ್./ ಇ.ಎಸ್.ಐ. ವಂತಿಗೆ ಸಂದಾಯವಾಗುತ್ತಿರುವುದನ್ನು ಖಚಿತಪಡಿಸಿಕೊಳ್ಳುವ ಬಗ್ಗೆ ಸೂಕ್ತ ನಿಗಾವಹಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಸಾ.ಸ.7:9 (2024)

ವಿಷಯ: ದಿನಾಂಕ 01-07-2024ರವರೆಗಿನ ಬಿ.ಎ./ಬಿ.ಎಸ್ಸಿ./ಬಿ.ಕಾಂ./ಬಿ.ಎಸ್.ಡಬ್ಲ್ಯು/ ಬಿ.ಎಡ್./ಬಿ.ಎ.(ಹೆಚ್.ಆರ್.ಡಿ.)/ಬಿ.ಬಿ.ಎ./ಬಿ.ಹೆಚ್.ಎಂ./ಬಿ.ಎಸ್ಸಿ.(ಹೆಚ್.ಎಸ್)/ ಬಿ.ಸಿ.ಎ./ಬಿ.ಎಸ್ಸಿ.(ಫ್ಯಾಷನ್ ಡಿಸೈನ್)/ ಬಿ.ಎಸ್ಸಿ. (ಇಂಟೀರಿಯರ್ ಡಿಸೈನ್ & ಡೆಕೋರೇಶನ್)/ ಬಿ.ಪಿ.ಎಡ್./ ಬಿ.ಎಸ್ಸಿ. (ಎಫ್.ಎನ್.ಡಿ.)/ ಬಿ.ಎ.ಎಸ್.ಎಲ್.ಪಿ ಇತ್ಯಾದಿ ಪದವಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಅಧ್ಯಾಪಕರ ಜೇಷ್ಠತಾ ಪಟ್ಟಿ ಅನುಮೋದನೆ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.7:10 (2024)

ವಿಷಯ: ವಿವಿಧ ಬೋಧಕ / ಇತರ ಶೈಕ್ಷಣಿಕ ಹುದ್ದೆಗಳ ನೇಮಕಾತಿ / ಪದೋನ್ನತಿಗೆ ಸಂಬಂಧಿಸಿ ಆಯ್ಕೆ ಸಮಿತಿ ರಚಿಸಲು ವಿಷಯ ತಜ್ಞರ ಪಟ್ಟಿಯನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಯೋಗವಿಜ್ಞಾನ ವಿಷಯದ ತಜ್ಞರ ಪಟ್ಟಿಯನ್ನುಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.7:11 (2024)

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂ ನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ / ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ - ಸ್ಕ್ರೀನಿಂಗ್ ಕಂ ಇವ್ಯಾಲ್ಯುವೇಶನ್ / ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.7:12 (2024)

ವಿಷಯ: ಶ್ರೀಮತಿ ನಾಗವೇಣಿ ಪಿ., ನಿವೃತ್ತ ಉಪಕುಲಸಚಿವರು, ಕುಲಸಚಿವರ ಕಚೇರಿ ಇವರ ಪಿಂಚಣಿ ಸೌಲಭ್ಯಗಳ ಕುರಿತು.

**ನಿರ್ಣಯ:** ಲೆಕ್ಕ ಪರಿಶೋಧಕರ ಆಕ್ಷೇಪಣೆಯ ಹಿನ್ನೆಲೆಯಲ್ಲಿ ವಿಷಯವನ್ನು ಪರಿಶೀಲಿಸಿ ತೀರ್ಮಾನ ತೆಗೆದುಕೊಳ್ಳಲು ಒಂದು ಸಮಿತಿಯನ್ನು ರಚಿಸಿ, ಸಮಿತಿ ನೀಡುವ ವರದಿ ಆಧಾರದಲ್ಲಿ ಪ್ರಕರಣವನ್ನು ಶೀಘ್ರವೇ ಇತ್ಯರ್ಥಗೊಳಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಸಾ.ಸ.7:13 (2024)

ವಿಷಯ: ಸ್ಕೂಲ್ ಆಫ್ ಸೋಷಿಯಲ್ ವರ್ಕ್, ರೋಶನಿ ನಿಲಯ, ಇಲ್ಲಿನ ಸಂಶೋದನಾ ವಿದ್ಯಾರ್ಥಿಗಳಿಗೆ 2022-23ನೇ ಸಾಲಿನ Ph.D. Course Work ಪರೀಕ್ಷೆಯ ಪತ್ರಿಕೆ-3 Review of Literature ಪರೀಕ್ಷೆಗಳನ್ನು ನಡೆಸದೇ ಇರುವ ಬಗ್ಗೆ ವಿಚಾರಣೆ ನಡೆಸಲು ರಚಿಸಿದ ಸಮಿತಿಯ ತನಿಖಾ ವರದಿಯ ಬಗ್ಗೆ.

**ನಿರ್ಣಯ:** ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ಈ ಸಂಬಂಧವಾಗಿ ಕುಲಸಚಿವ (ಪರೀಕ್ಷಾಂಗ) ಇವರು ನೀಡಿರುವ ಆದೇಶದಂತೆ ದಿನಾಂಕ 23.12.2024ರೊಳಗೆ ಸದರಿ ಪರೀಕ್ಷೆಗಳನ್ನು ನಡೆಸಿ ಫಲಿತಾಂಶವನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಮತ್ತೊಮ್ಮೆ ಸಂಬಂಧಪಟ್ಟವರಿಗೆ ಸೂಚನೆ ನೀಡುವಂತೆ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.7:14 (2024)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಅಕ್ಟೋಬರ್ 2024ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಮುಂದಿನ ಸಿಂಡಿಕೇಟ್ ಸಭೆಯಲ್ಲಿ IQAC ವರದಿಯನ್ನು ಪಿ.ಪಿ.ಟಿ. ಮೂಲಕ ಸಿಂಡಿಕೇಟು ಸದಸ್ಯ ಡೀನರು ಸಭೆಗೆ ಮಂಡಿಸುವಂತೆ ನಿರ್ಣಯಿಸಲಾಯಿತು. ವಿಶ್ವವಿದ್ಯಾನಿಲಯದ ಶಿಕ್ಷಕರು ಹೊಸ ಪೇಟೆಂಟ್‌ಗಳನ್ನು ಪಡೆದಿದ್ದು, ವಿವಿಧ ಸಂಶೋಧನ ಯೋಜನೆಗಳು ಮಂಜೂರುಗೊಂಡಿವೆ. ಪಿ.ಎಂ. ಉಷಾ, ಮಂಗಳೂರು ವಿಶ್ವವಿದ್ಯಾನಿಲಯ ಹಳೆ ವಿದ್ಯಾರ್ಥಿಗಳ ಸಂಘ (MAA) ಸೇರಿದಂತೆ ವಿವಿಧ ಸಂಸ್ಥೆಗಳಿಂದ ಅನುದಾನ ದೊರೆತ್ತಿದ್ದು, ಇದರಿಂದ NIRF-2025 ನಲ್ಲಿ ಉತ್ತಮ ಶ್ರೇಯಾಂಕ ದೊರೆಯುವ ವಿಶ್ವಾಸವನ್ನು ಮಾನ್ಯ ಕುಲಪತಿಯವರು ವ್ಯಕ್ತಪಡಿಸಿದರು. NIRF-2025 (National Agency) ಗೆ ದಾಖಲಿಸಿರುವ ಅಂಕಿ ಅಂಶ ಹಾಗೂ ದಾಖಲಾತಿ ವಿವರಗಳ ಪ್ರತಿಯನ್ನು ನೀಡುವಂತೆ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಕೋರಿದರು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ಸಾ.ಸ.7:15 (2024)

ವಿಷಯ: ಶ್ರೀ ಎಸ್.ಎಸ್.ನಾಯಕ್, ಚಾರ್ಟರ್ಡ್ ಅಕೌಂಟೆಂಟ್ ರವರಿಗೆ ವೃತ್ತಿಪರ ಶುಲ್ಕ ಪಾವತಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.7:16 (2024)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಗೆ ಅಧ್ಯಕ್ಷರುಗಳ ನೇಮಕಾತಿ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ಅಧ್ಯಯನ ವಿಭಾಗಗಳಿಗೆ ಅಧ್ಯಕ್ಷರುಗಳ ನೇಮಕಾತಿಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.7:17 (2024)

ವಿಷಯ: ಶ್ರೀ ಸುರೇಶ್ ಬಿ.ನಾವೂರು, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ- ಬಗ್ಗೆ. "ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರು ವಿಶ್ವವಿದ್ಯಾನಿಲಯದ ಚಟುವಟಿಕೆಗಳಿಗೆ ತುರ್ತಾಗಿ ಭೇಟಿ ನೀಡಲು ವಾಹನಗಳನ್ನು ಒದಗಿಸುವಂತೆ ಕೇಳಿಕೊಂಡಾಗ ಆಡಳಿತ ವಿಭಾಗದವರು ನಿರಾಕರಿಸುತ್ತಿರುವ ವಿಚಾರದ ಬಗ್ಗೆ ಚರ್ಚೆ ಮತ್ತು ಕ್ರಮ."

**ನಿರ್ಣಯ:** ಅಧಿಕೃತ ಕಾರ್ಯಕ್ರಮಗಳಿಗೆ ಕುಲಸಚಿವರ ಅನುಮತಿ ಮೇರೆಗೆ ಮಾತ್ರ ವಾಹನಗಳನ್ನು ಬಳಸುವ ಹಾಗೂ ವಿಶ್ವವಿದ್ಯಾನಿಲಯದ ವಾಹನಗಳನ್ನು ವೈಯುಕ್ತಿಕ ಕೆಲಸಗಳ ಹಿನ್ನೆಲೆಯಲ್ಲಿ ದುರುಪಯೋಗವಾಗದ ರೀತಿಯಲ್ಲಿ ಬಳಸಲು ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.7:18 (2024)

ವಿಷಯ: ಶ್ರೀ ರಘುರಾಜ್ ಕೆ., ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

**ವಿಷಯ 1 :** UUCMS ನ ತಾಂತ್ರಿಕ ದೋಷದಿಂದಾಗಿ ಎಷ್ಟು ವಿದ್ಯಾರ್ಥಿಗಳಿಗೆ ಸಮಸ್ಯೆಯಾಗಿದೆ ಮತ್ತು ಪರಿಹಾರಕ್ಕಾಗಿ ಕ್ರಮ.

**ನಿರ್ಣಯ:** ವಿದ್ಯಾರ್ಥಿಗಳ ಶುಲ್ಕ ಪಾವತಿಯ ಸಮಸ್ಯೆಯನ್ನು ಪರಿಹಾರ ಮಾಡಲಾಗಿದೆ ಎಂಬುದನ್ನು ಕುಲಸಚಿವ (ಪರೀಕ್ಷಾಂಗ) ಇವರು ಸಭೆಗೆ ತಿಳಿಸಿದರು.

UUCMS ನಿಂದಾಗಿ ವಿದ್ಯಾರ್ಥಿಗಳಿಗಾಗಿರುವ ಫಲಿತಾಂಶಕ್ಕೆ ಸಂಬಂಧಿಸಿದ ಎಲ್ಲಾ ರೀತಿಯ ಸಮಸ್ಯೆಗಳ ಅಂಕಿ ಅಂಶಗಳನ್ನು ಹಾಗೂ ಫಲಿತಾಂಶಗಳು ಬಾಕಿ ಇರುವ ಬಗ್ಗೆ Google Format ಮೂಲಕ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಂದ ವಿವರವನ್ನು ಪಡೆದು ಕೂಡಲೇ ಈ ಬಗ್ಗೆ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಯಿತು. ವಿದ್ಯಾರ್ಥಿಗಳ ಸಮಸ್ಯೆಗಳನ್ನು ಕಾಲೇಜುಗಳ UUCMS ನೋಡೆಲ್ ಆಫೀಸರ್ / ಪ್ರಾಂಶುಪಾಲರುಗಳು ಖುದ್ದಾಗಿ ವಿಶ್ವವಿದ್ಯಾನಿಲಯಕ್ಕೆ ಆಗಮಿಸಿ ಪರಿಹರಿಸಿಕೊಳ್ಳಬೇಕೇ ಹೊರತು ವಿದ್ಯಾರ್ಥಿಗಳನ್ನು ಯಾವುದೇ ಕಾರಣಕ್ಕೂ ವಿಶ್ವವಿದ್ಯಾನಿಲಯ ಕ್ಯಾಂಪಸಿಗೆ ಕಳುಹಿಸಬಾರದು ಎಂದು ಎಲ್ಲಾ ಕಾಲೇಜುಗಳಿಗೆ ಕುಲಸಚಿವ (ಪರೀಕ್ಷಾಂಗ) ಕಛೇರಿಯಿಂದ ಸೂಚಿಸಲು ಸಿಂಡಿಕೇಟು ನಿರ್ಣಯಿಸಿತು.

**ವಿಷಯ 2 :** Non Teaching ಪದೋನ್ನತಿಯ ಅರ್ಹತಾ ಪಟ್ಟಿಯನ್ನು ಪ್ರಕಟ ಮಾಡದೇ ತಡೆಹಿಡಿದಿರುವ ಬಗ್ಗೆ.

**ನಿರ್ಣಯ:** DPAR ಅಭಿಪ್ರಾಯ ಪಡೆದು ಪ್ರಕಟಿಸಲು ನಿರ್ಣಯಿಸಲಾಯಿತು.

**ವಿಷಯ 3 :** ವಿಶ್ವವಿದ್ಯಾನಿಲಯದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ಥಳೀಯ ಉದ್ಯೋಗಿಗಳ ವರ್ಗಾವಣೆ ಬಗ್ಗೆ.

**ನಿರ್ಣಯ:** ಸದರಿ ವಿಷಯಕ್ಕೆ ಸಂಬಂಧಿಸಿ, ಸಿಂಡಿಕೇಟು ಸದಸ್ಯರಾದ ಶ್ರೀ ರಘುರಾಜ್ ಕೆ. ಇವರಿಂದ ಮಾಹಿತಿಯನ್ನು ಕೋರಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.7:19 (2024)

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂ ನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ / ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ- ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.7:20(2024)

ವಿಷಯ: NMR ಪ್ರಯೋಗಾಲಯದಲ್ಲಿರುವ ಉಪಕರಣಗಳ ಬಳಕೆಗೆ ಸಂಬಂಧಿಸಿ ಮಾರ್ಗಸೂಚಿ ತಯಾರಿಸಲು ರಚಿಸಿದ ಸಮಿತಿ ಸಭೆಯ ನಡವಳಿಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.7:21(2024)

ವಿಷಯ: 2024-25ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ಕಾರ್ಯಕ್ರಮಕ್ಕೆ ಆಯ್ಕೆಯಾಗಿರುವ ಅತಿಥಿ ಉಪನ್ಯಾಸಕರ ಪಟ್ಟಿ ಮತ್ತು ಪರಿಷ್ಕೃತ ಸಂಭಾವನೆ ಮಾಹಿತಿ ಸಲ್ಲಿಕೆಯ ಕುರಿತು.

**ನಿರ್ಣಯ:** ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರು ವಿಜ್ಞಾನ ನಿಕಾಯದ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಅತಿಥಿ ಉಪನ್ಯಾಸಕರ ಎರಡು ಗಂಟೆಯ ಪ್ರಾಯೋಗಿಕ ತರಗತಿಗಳನ್ನು ಒಂದು ಗಂಟೆಯ ಬೋಧನಾ ತರಗತಿ ಎಂದು ಪರಿಗಣಿಸಿರುವುದನ್ನು ಆಕ್ಷೇಪಿಸಿ ಈ ಬಗ್ಗೆ ಸೂಕ್ತ ತಿದ್ದುಪಡಿಯನ್ನು ಸೂಚಿಸಿರುವುದರಿಂದ ಸದರಿ ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟ್ ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

**ಇತರೆ ವಿಷಯಗಳು:**

1) ವಿಶ್ವವಿದ್ಯಾನಿಲಯವು ವಿವಿಧ ಸಂಸ್ಥೆಗಳೊಂದಿಗೆ ಮಾಡಿಕೊಂಡ ಒಡಂಬಡಿಕೆಗಳ ಪ್ರತಿಗಳನ್ನು ಸಿಂಡಿಕೇಟು ಸದಸ್ಯರುಗಳಿಗೆ ನೀಡಲು ನಿರ್ಣಯಿಸಲಾಯಿತು.

2) ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ವೃತ್ತಿ ಪದೋನ್ನತಿಯ ಆಯ್ಕೆ ಸಮಿತಿಯ ಶಿಫಾರಸ್ಸಿನ ಪ್ರತಿಗಳನ್ನು ಸಿಂಡಿಕೇಟು ಸದಸ್ಯರುಗಳಿಗೆ ನೀಡುವಂತೆ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ. ಮಹದೇಶ ಇವರು ಸಲಹೆ ನೀಡಿದರು.

3) ಅತಿಥಿ ಉಪನ್ಯಾಸಕರುಗಳಿಗೆ ಪರೀಕ್ಷಾ ಕಾರ್ಯಗಳ ಹಾಗೂ ಮೌಲ್ಯಮಾಪನಗಳ ಸಂಭಾವನೆಯನ್ನು ಕೂಡಲೇ ಪಾವತಿಸುವಂತೆ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ.ಮಹದೇಶ ಕೋರಿದರು. ಈ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

4) ಕ್ರಿಸ್‌ಮಸ್ ರಜಾ ಅವಧಿಯಲ್ಲಿ ನಿಗದಿಪಡಿಸಿದ್ದ ಪರೀಕ್ಷೆಗಳನ್ನು ಜನವರಿ 2 ರಿಂದ ನಡೆಸುವಂತೆ ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ರಘುರಾಜ್ ಮತ್ತು ಶ್ರೀಮತಿ ಜೂಡಿತ್ ಮೆಂಡೋನ್ಸ ವಿನಂತಿಸಿದರು. ಈ ಬಗ್ಗೆ ಸಿಂಡಿಕೇಟ್ ಸಭೆಯು ಸಕರಾತ್ಮಕ ನಿರ್ಣಯ ಕೈಗೊಂಡ ಹಿನ್ನೆಲೆಯಲ್ಲಿ ಕುಲಸಚಿವ (ಪರೀಕ್ಷಾಂಗ) ಇವರು ಪರಿಷ್ಕೃತ ಪರೀಕ್ಷಾ ವೇಳಾಪಟ್ಟಿಯನ್ನು ಪ್ರಕಟಿಸುವುದಾಗಿ ಸಭೆಯ ಗಮನಕ್ಕೆ ತಂದರು.

5) ಪ್ರಸ್ತುತ ಸ್ನಾತಕೋತ್ತರ ಕೇಂದ್ರ ಚಿಕ್ಕ ಅಳುವಾರ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಡಾ. ಶಾಮ ಸುಂದರ್ ಜೆ. ಇವರ ವರ್ಗಾವಣೆಯನ್ನು ಪರಿಶೀಲಿಸಲು ಸಿಂಡಿಕೇಟು ಉಪಸಮಿತಿಯನ್ನು ರಚಿಸಲು ನಿರ್ಣಯಿಸಲಾಯಿತು.

6) ಎಫ್.ಎಂ.ಕೆ.ಎಂ.ಸಿ. ಕಾಲೇಜಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಾ. ರಾಜೇಂದ್ರ ಆರ್. ಮತ್ತು ಡಾ. ಹನುಮಂತಪ್ಪ ತಳವಾರ್ ಇವರು ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆ ಕೋರಿ ಸಲ್ಲಿಸಿರುವ ಮನವಿಯ ಕುರಿತು ಚರ್ಚಿಸಿ ಮುಂದಿನ ಸಿಂಡಿಕೇಟು ಸಭೆಗೆ ಸಮಗ್ರ ಮಾಹಿತಿ / ಪ್ರಸ್ತಾವನೆಯೊಂದಿಗೆ ಸಿಬ್ಬಂದಿ ವಿಭಾಗದಿಂದ ಕಾರ್ಯಸೂಚಿಯನ್ನು ಮಂಡಿಸಲು ನಿರ್ಣಯಿಸಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

ಸಹಿ/- ಸಹಿ/-

**ಕುಲಸಚಿವರು** **ಕುಲಪತಿಯವರು**